ಅಧ್ಯಕ್ಷರು.—ಆಗಬಹುದು. ಮಾನ್ಯ ಲೋಕೋಪಯೋಗಿ ಸಚಿವರ ಹೆಸರಿನಲ್ಲಿರುವ ಪ್ರಶ್ನೆಗಳನ್ನು ಅವರು ಸಭೆಗೆ ಬಂದನಂತರ ತೆಗೆದುಕೊಳ್ಳುತ್ತೇನೆ.

ಶ್ರೀ ಎಂ. ಮಲ್ಲಿಕಾರ್ಜುನ ಖಾರ್ಗೆ.—ಅವರು ಸಭೆಗೆ ಬರಲು ಸಾಧ್ಯವಾಗದಿದ್ದರೆ ಅವರ ಪರವಾಗಿ ಬೇರೆಯವರು ಉತ್ತರ ಕೊಡಬಹುದಲ್ಲವೇ ?

ಅಧ್ಯಕ್ಷರು.—ಬೇರೆಯವರು ಉತ್ತರ ಕೊಟ್ಟರೆ, ಸಂಬಂಧಪಟ್ಟ ಮಂತ್ರಿಗಳೇ ಬರಲಿ ಎಂದು ಕೆಲವರು ಹೇಳುತ್ತಾರೆ. ಆದ್ದರಿಂದ ಅವರು ಬರಲಿ. ಅವರು ಸ್ವಲ್ಪ ನಿಧಾನವಾಗಿ ಬರುವುದಾಗಿ ನನಗೆ ತಿಳಿಸಿದ್ದಾರೆ.

ಕಾಪು ಕ್ಷೇತ್ರದಲ್ಲಿರುವ ಕಿರಿಯ ಕಾಲೇಜನ್ನು ಪೂರ್ಣ ಪ್ರಮಾಣದ ಕಾಲೇಜನ್ನಾಗಿ ಪರಿವರ್ತಿಸುವುದು.

೧೦೭೮. ಶ್ರೀ ವಸಂತ ವಿ. ಸಾಲ್ಯಾನ (ಕಾಪು).—ಮಾನ್ಯ ಶಿಕ್ಷಣ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಕಾಪು ಕ್ಷೇತ್ರದ ಸರಕಾರಿ ಮೀನುಗಾರಿಕಾ ಜೂನಿಯರ್ ಕಾಲೇಜನ್ನು ಪೂರ್ಣ ಪ್ರಮಾಣದ ಕಾಲೇಜಾಗಿ ಪರಿವರ್ತಿಸಬೇಕೆಂದು ಸರಕಾರದವರ ಗಮನಕ್ಕೆ ಬಂದಿದೆಯೇ,

ಆ) ಸದರಿ ಕಾಲೇಜನ್ನು ಪೂರ್ಣ ಪ್ರಮಾಣದ ಕಾಲೇಜಾಗಿ ಪರಿವರ್ತಿಸಲು ಬೇಡಿಕೆಗಳು ಏನಾದರೂ ಸಾರ್ವಜನಿಕರಿಂದ ಬಂದಿವೆಯೆ,

ಇ) ಹಾಗಿದ್ದಲ್ಲಿ, ಸದರಿ ಕಾಲೇಜನ್ನು ಪೂರ್ಣ ಪ್ರಮಾಣದ ಕಾಲೇಜಾಗಿ ಪರಿವರ್ತಿಸಲು ಯಾವಾಗ ಕ್ರಮ ಕೈಗೊಳ್ಳಲಾಗುವುದು.

ಶ್ರೀ ಡಿ. ಮಂಜುನಾಥ್ (ಶಿಕ್ಷಣ ಸಚಿವರು).—

ಅ) ಇಲ್ಲ.

ಆ) ಇಲ್ಲ.

ಇ) ೧೯೮೭-೮೮ರ ಸಾಲಿನಲ್ಲಿ ಪ್ರಥಮ ದರ್ಜೆ ಕಾಲೇಜುಗಳಿಗೆ ಮಂಜೂರು ನೀಡಬಾರದೆಂದು ಸರ್ಕಾರವು ನಿರ್ಧರಿಸಿದೆ. ಆರ್ಥಿಕ ಸಂಪನ್ಮೂಲಗಳು ಸುಧಾರಿಸಿದೊಡನೆ ಈ ಬಗ್ಗೆ ಪರಿಶೀಲಿಸಲಾಗುವುದು.

ಶ್ರೀ ವಸಂತ ವಿ. ಸಾಲಿಯಾನ.—ಇಲ್ಲಿ ನನ್ನ ಮೊದಲನೆಯ ಪ್ರಶ್ನೆಗೆ ಉತ್ತರವಾಗಿ 'ಸರ್ಕಾರದ ಗಮನಕ್ಕೆ ಬಂದಿಲ್ಲ' ಎಂದು ಹೇಳಿದ್ದಾರೆ. ಆದರೆ ಈ ಬಗ್ಗೆ ಮಾನ್ಯ ಮಂತ್ರಿಗಳಿಗೆ ಮೂರು ಕಾಗದ ಗಳನ್ನು ಬರೆದಿದ್ದೇನೆ. ಆದ್ದರಿಂದ ಇದು ಸರ್ಕಾರದ ಗಮನಕ್ಕೆ ಬಂದಿಲ್ಲವೆಂದು ಹೇಳುವುದು ತಪ್ಪು ಅಭಿಪ್ರಾಯವಾಗಿದೆ. ಮತ್ತು ನನ್ನ ಎರಡನೆಯ ಪ್ರಶ್ನೆಗೆ ಉತ್ತರವಾಗಿ ಈ ಬಗ್ಗೆ ಸಾರ್ವಜನಿಕರಿಂದ ಬೇಡಿಕೆಗಳು ಬಂದಿಲ್ಲವೆಂದು ಹೇಳಿದ್ದಾರೆ. ಆದರೆ ಮಾನ್ಯ ಮಂತ್ರಿಗಳೇ ಈ ಬಗ್ಗೆ ೧೯೮೭-೮೮ನೇ ಸಾಲಿನಲ್ಲಿ ಇದನ್ನು ಪರಿಶೀಲನೆ ಮಾಡಿಕೊಡುವುದಾಗಿ ನನಗೆ ಪತ್ರ ಬರೆದಿದ್ದಾರೆ. ಈಗ ನನ್ನ ಕ್ಷೇತ್ರದಲ್ಲಿ ಸರ್ಕಾರದ ಕಾಲೇಜು ಇಲ್ಲದ ಕಾರಣ ವಿದ್ಯಾರ್ಥಿಗಳು ೨೦ ಕಿಲೋಮೀಟರ್ ದೂರದ ಬೇರೆ ಕಾಲೇಜಿಗೆ ಹೋಗಬೇಕಾಗಿದೆ. ಡೆಪ್ಯೂಟಿ ಡೈರಕ್ಟರ್ ಆಫ್ ಕೊಲಿಜಿಯೇಟ್ ಎಜುಕೇಷನ್ ಅವರು ಫೆಬ್ರುವರಿ ಕೊನೆಯಲ್ಲಿ ಅಲ್ಲಿಗೆ ಬಂದು ಈ ಬಗ್ಗೆ ಇನ್ಸ್‌ಪೆಕ್ಷನ್ ಮಾಡಿ ಆ ಭಾಗಕ್ಕೆ ಪೂರ್ಣ ಪ್ರಮಾಣದ ಕಾಲೇಜು ಕೊಡುವುದು ಒಳ್ಳೆಯದೆಂದು ರೆಕಾರ್ಡ್ ಮಾಡಿ ಹೋಗಿದ್ದಾರೆ. ಆದ್ದರಿಂದ ಅಲ್ಲಿಗೆ ಆದಷ್ಟು ಬೇಗ ಪೂರ್ಣ ಪ್ರಮಾಣದ ಮೀನುಗಾರಿಕಾ ಕಾಲೇಜನ್ನು ಪ್ರಾರಂಭ ಮಾಡಬೇಕೆಂದು ನಾನು ಮನವಿ ಮಾಡಿಕೊಳ್ಳುತ್ತೇನೆ.

ಶ್ರೀ ಡಿ. ಮಂಜುನಾಥ್ —ಈ ಬಗ್ಗೆ ಮಾನ್ಯ ಸದಸ್ಯರು ನನಗೆ ಅರ್ಜಿ ಕಳುಹಿಸಿಕೊಟ್ಟರು. ನಂತರ ತನಿಖೆ ಮಾಡಿ ವಿವರವಾದ ವರದಿಯನ್ನು ಕಳುಹಿಸಿಕೊಡಿ ಎಂದು ನಾನು ಅಧಿಕಾರಿಗಳಿಗೆ ತಿಳಿಸಿದೆ. ಅವರಿಂದ ನನಗೆ ಇನ್ನೂ ವರದಿ ಬಂದಿಲ್ಲ. ಈಗ ಅಲ್ಲಿರುವ ಕಾಲೇಜನ್ನು ಅಪ್-ಗ್ರೇಡ್

ಮಾಡಬೇಕೆಂದು ಕೇಳಿದ್ದಾರೆ. ಆದರೆ ಹಣಕಾಸಿನ ತೊಂದರೆಯಿಂದ ಇದನ್ನು ಮಾಡಬೇಕೋ ಅಥವಾ ಬಿಡಬೇಕೋ ಎಂಬ ಬಗ್ಗೆ ಇನ್ನೂ ಅಂತಿಮ ತೀರ್ಮಾನ ಮಾಡಿಲ್ಲ. ಅಲ್ಲಿನ ಬಡ ವಿದ್ಯಾರ್ಥಿಗಳಿಗೋಸ್ಕರ ಇದನ್ನು ಅಪ್-ಗ್ರೇಡ್ ಮಾಡುವುದು ಅಗತ್ಯವಿದೆ. ಆದ್ದರಿಂದ ಇದನ್ನು ನಾನು ಪರಿಶೀಲನೆ ಮಾಡುತ್ತೇನೆ.

ಗ್ರಾಮಾಂತರ ಪ್ರದೇಶಗಳಲ್ಲಿ ಸರ್ಕಾರಿ ಪ್ರೌಢ ಶಾಲೆಗಳನ್ನು ಪ್ರಾರಂಭಿಸುವುದು.

೯೩೫. ಶ್ರೀ ವಸಂತ ಬಂಗೇರ (ಬೆಳ್ತಂಗಡಿ).—ಮಾನ್ಯ ಶಿಕ್ಷಣ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಕಳೆದ ವರ್ಷ ರಾಜ್ಯದಲ್ಲಿ ಒಂದೇ ಒಂದು ಸರ್ಕಾರಿ ಪ್ರೌಢಶಾಲೆಯನ್ನು ತೆರೆಯಲು ಅನುಮತಿ ಏಕೆದಿರಲು ಕಾರಣವೇನು ?

ಆ) ಮುಂದಿನ ವರ್ಷ ಸರ್ಕಾರಿ ಪ್ರೌಢಶಾಲೆಗಳನ್ನು ತೆರೆಯಲು ಅನುಮತಿ ನೀಡಲಾಗುವುದೇ, ಅದರಲ್ಲೂ ಗ್ರಾಮೀಣ ಪ್ರದೇಶ ಹಾಗೂ ಮಲೆನಾಡು ಪ್ರದೇಶಗಳಲ್ಲಿ ಹೆಚ್ಚು ಆದ್ಯತೆ ಕೊಡಲಾಗುವುದೇ ?

ಇ) ದಕ್ಷಿಣ ಕನ್ನಡ ಜಿಲ್ಲೆಯ ಹೆಚ್ಚಿನ ಪ್ರೌಢಶಾಲೆಗಳಲ್ಲಿ ಅಧ್ಯಾಪಕರ ಕೊರತೆ ಇರುವುದು ಸರ್ಕಾರದವರ ಗಮನಕ್ಕೆ ಬಂದಿದೆಯೇ ?

ಈ) ಹಾಗಿದ್ದಲ್ಲಿ ಅಧ್ಯಾಪಕರ ಕೊರತೆಯನ್ನು ಯಾವಾಗ ನಿವಾರಿಸಲಾಗುವುದು ?

ಶ್ರೀ ಡಿ. ಮಂಜುನಾಥ್ (ಶಿಕ್ಷಣ ಸಚಿವರು).—

ಅ) ಕಳೆದ ಮೂರು ವರ್ಷಗಳಿಂದಲೂ ರಾಜ್ಯದಲ್ಲಿ ಹೆಚ್ಚು ಸರ್ಕಾರಿ ಪ್ರೌಢಶಾಲೆಗಳನ್ನು ತೆರೆಯಲು ಮಂಜೂರಾತಿ ನೀಡಿರುವುದರಿಂದ ಕಳೆದ ವರ್ಷ ಯಾವುದೇ ಸರ್ಕಾರಿ ಪ್ರೌಢ ಶಾಲೆಯನ್ನು ತೆರೆಯಬಾರದೆಂದು ಸರ್ಕಾರ ನಿಲುವನ್ನು ತಳೆದಿರುವುದರಿಂದ ಯಾವುದೇ ಸರ್ಕಾರಿ ಪ್ರೌಢಶಾಲೆಯನ್ನು ತೆರೆಯಲು ಅನುಮತಿ ನೀಡಿಲ್ಲ.

ಆ) ಇದರ ಬಗ್ಗೆ ತೀರ್ಮಾನ ತೆಗೆದುಕೊಂಡಿಲ್ಲ. ತೆಗೆದುಕೊಳ್ಳುವಾಗ ಈ ಪ್ರದೇಶಗಳ ಅವಶ್ಯಕತೆಯನ್ನು ಗಮನದಲ್ಲಿಡಲಾಗುವುದು.

ಇ) ಹೌದು.

ಈ) ಈಗಾಗಲೇ ಗುತ್ತಿಗೆ ಆಧಾರದ ಅಭ್ಯರ್ಥಿಗಳಿಂದ ತುಂಬಲಾಗಿರುತ್ತದೆ.

ಶ್ರೀ ವಸಂತ ಬಂಗೇರಾ.—ಸನ್ಮಾನ್ಯ ಅಧ್ಯಕ್ಷರೇ, ನನ್ನ ಕ್ಷೇತ್ರದಲ್ಲಿ ಯಾವುದೇ ಸೀನಿಯರ್ ಕಾಲೇಜು ಇಲ್ಲ. ಕರಾವಳಿ ಪ್ರದೇಶದ ವಿದ್ಯಾರ್ಥಿಗಳು ೨೦ ಕಿಲೋಮೀಟರ್ ದೂರ ಹೋಗಬೇಕಾಗಿದೆ. ಆದಷ್ಟು ಬೇಗ ಈ ವರ್ಷದಲ್ಲಿ ಪ್ರಾತಿನಿಧ್ಯ ಕೊಟ್ಟು ಈ ಕೆಲಸವನ್ನು ಮಾಡಬೇಕು. ಅಲ್ಲಿ ಜಾಗ ಇದೆ. ಊರಿನವರು ಒಪ್ಪಿದ್ದಾರೆ. ಡೆಪ್ಯೂಟಿ ಡೈರೆಕ್ಟರ್ ಆಫ್ ಎಜುಕೇಷನ್ ಇನ್ಸ್‌ಪೆಕ್ಟ್ ಮಾಡಿ ಹೋಗಿದ್ದಾರೆ, ನಾನೂ ಸಹ ಇನ್ಸ್‌ಪೆಕ್ಟ್ ಮಾಡಿದ್ದೇನೆ. ಆದುದರಿಂದ ಈ ವರ್ಷದಲ್ಲಿ ಇದಕ್ಕೆ ಸ್ಪೆಷಲ್ ಆದ್ಯತೆ ಕೊಟ್ಟು ಮಾಡಬೇಕೆಂದು ಮಾನ್ಯ ಮಂತ್ರಿಗಳಲ್ಲಿ ವಿನಂತಿ ಮಾಡಿಕೊಳ್ಳುತ್ತೇನೆ.

ಶ್ರೀ ಡಿ. ಮಂಜುನಾಥ್.—ಅಲ್ಲಿ ಎಂಎಲ್‌ಎ ಗಾರರೇ ಬಹುಮಂದಿ, ಇದ್ದಾರೆ ಅವರು ಬಡವರ ಪರವಾಗಿ ಈ ವರ್ಷದ ಹಣದ ಇತಿಮಿತಿ ನೋಡಿದರೆ ಪ್ಲಾನ್‌ನಲ್ಲಿ ಹಣ ಕಡಿಮೆ ಮಾಡಿದ್ದಾರೆ. ಈಗಿರುವ ಕಾಲೇಜನ್ನು ಅಪ್‌ಗ್ರೇಡ್ ಮಾಡಬೇಕು ಎಂದು ಮಾನ್ಯ ಸದಸ್ಯರು ಕೇಳುತ್ತಾ ಇದ್ದಾರೆ. ಇದರ ಬಗ್ಗೆ ಪೂರ್ಣ ವಿವರ ತರಿಸಿ ಕೊಡಬೇಕು ಎನ್ನುವುದಾದರೆ, ಈ ವರ್ಷವೇ ಕೊಡುವುದಕ್ಕೆ ಪ್ರಯತ್ನ ಮಾಡುತ್ತೇನೆ.